39

# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಬಿಡಿ\4123\2014\ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 28.11.2016

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ

ವಿಷಯ: ಸರ್ಕಾರಿ ನೌಕರರಾದ ಶ್ರೀ.ತಿಮ್ಮಾಬೋವಿ, ತಹಶೀಲ್ದಾರ್, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ ಮತ್ತು (2) ಶ್ರೀಮತಿ.ಅನಿತಾಲಕ್ಷ್ಮಿ, ಉಪ ವಿಭಾಗಾಧಿಕಾರಿಗಳು, ಮಧುಗಿರಿ ಉಪ ವಿಭಾಗ, ಮಧುಗಿರಿ, ತುಮಕೂರು ಜಿಲ್ಲೆ ರವರು ಕರ್ತವ್ಯ ಲೋಪ/ದುರ್ವರ್ತನೆ ಎಸಗಿರುವ ಬಗ್ಗೆ.

*******

ಶ್ರೀ.ನಾಗಭೂಷಣ ಬಿನ್ ಹನುಮಂತಪ್ಪ, ದೊಡ್ಡಹಳ್ಳಿ ಚಿಕ್ಕಹಳ್ಳಿ ಅಂಚೆ, ಪಾವಗಡ ತಾಲ್ಲೂಕು ತುಮಕೂರು ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಶ್ರೀ.ತಿಮ್ಮಾಬೋವಿ, ತಹಶೀಲ್ದಾರ್, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ ಮತ್ತು (2) ಶ್ರೀಮತಿ.ಅನಿತಾಲಕ್ಷ್ಮಿ, ಉಪ ವಿಭಾಗಾಧಿಕಾರಿಗಳು, ಮಧುಗಿರಿ ಉಪ ವಿಭಾಗ, ಮಧುಗಿರಿ, ತುಮಕೂರು ಜಿಲ್ಲೆ (ಇನ್ನು ಮುಂದೆ ಎದುರುದಾರ ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಅವ್ಯವಹಾರದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ಪಾವಗಡ ತಾಲ್ಲೂಕು ಕಾಮನದುರ್ಗ ಗ್ರಾಮದ ಸ. ನಂ: 17ರಲ್ಲಿ ಪೋಡಿ ಮಾಡಿಸಲು ದೂರುದಾರರು ಮೋಜಣಿ ಇಲಾಖೆಗೆ ದಿ: 3.12.2012ರಂದು ತತ್ ಕಾಲ್ ಪೋಡಿಗೆ ಅರ್ಜಿ ಸಲ್ಲಿಸಿದ್ದರು. ಆದರೆ ಎದುರುದಾರರು ಸರ್ಕಾರದ ಸುತ್ತೋಲೆ ಪ್ರಕಾರ ನಿಗಧಿತ ಅವಧಿಯೊಳಗೆ ತತ್ ಕಾಲ್ ಪೋಡಿ ಮಾಡಿಕೊಡದೆ ಅನ್ಯಾಯ ಮಾಡಿರುತ್ತಾರೆ. ಆದ್ದರಿಂದ ಎದುರುದಾರರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ತನಗೆ ನ್ಯಾಯ ದೊರಕಿಸಿಕೊಡಬೇಕೆಂದು ದೂರು ಸಲ್ಲಿಸಿದ್ದಾರೆ.

3) ಎದುರುದಾರ ನಂ:1 ರವರು ಆಕ್ಷೇಪಣೆ ಸಲ್ಲಿಸಿರುವುದಿಲ್ಲ.

4) ಎದುರುದಾರ ನಂ:2 ರವರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರು ಸಲ್ಲಿಸಿರುವ ಅರ್ಜಿಯ ಬಗ್ಗೆ ಪರಿಶೀಲಿಸಲಾಗಿದ್ದು ಈ ಬಗ್ಗೆ ತಮ್ಮ ಕಾರ್ಯಾಲಯದಲ್ಲಿ ಆರ್.ಆರ್.ಟಿ.(ಅ)ಸಿಆರ್. 110/2013-14 ದಿ: 29.9.2014ರಂತೆ ಮೇಲ್ಮನವಿ ದಾಖಲಾಗಿದ್ದು ಅದು ಇನ್ನು ವಿಚಾರಣೆ ಹಂತದಲ್ಲಿರುತ್ತದೆ. ಆದ್ಯತೆಯ ಮೇರೆಗೆ ಪ್ರಕರಣವನ್ನು ವಿಲೇ ಗೊಳಿಸಲಾಗುವುದು ಆದ್ದರಿಂದ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

5) ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನಲ್ಲಿನ ಅಂಶಗಳನ್ನು ಪುನರ್ ಉಚ್ಚರಿಸಿದ್ದಾರೆ.

6. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಅ) "ದೂರುದಾರರು ಸರ್ಕಾರಿ ಸುತ್ತೋಲೆ ಸಂ: ತಾಂಪಭೂಫಟಕ 52/2008-09 ದಿ: 16.4.2009ರ ಪ್ರಕಾರ ರೈತರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ಮ್ಯುಟೇಷನ್ ಪೋಡಿ ಕಡತಗಳನ್ನು ಅತ್ಯಂತ ಕಡಿಮೆ ಅವಧಿಯಲ್ಲಿ ವಿಲೇ ಪಡಿಸುವ ನಿಟ್ಟಿನಲ್ಲಿ ರೈತ ಸ್ನೇಹಿ ಯೋಜನೆಯಾದ ತತ್ ಕಾಲ್ ಪೋಡಿ ಯೋಜನೆನ್ನು ಜಾರಿಗೆ ತಂದಿದ್ದು ಅದರ ಪ್ರಕಾರ ರೈತರಿಗೆ 30 ದಿನಗಳೊಳಗಾಗಿ ಪೋಡಿ ಕಾರ್ಯ ಮುಗಿಸಿ ಅವರ ಹೆಸರಿನಲ್ಲಿ ಆರ್.ಟಿ.ಸಿಯನ್ನು ನೀಡತಕ್ಕದ್ದು.

ಆ) ಎದುರುದಾರರಿಗೆ ಸರ್ಕಾರದ ಈ ಸುತ್ತೋಲೆ ಬಗ್ಗೆ ತಿಳುವಳಿಕೆ ಇದ್ದರೂ ಸಹ ಅವರು ಅದನ್ನು ಪಾಲಿಸದೆ ಆರ್.ಆರ್.ಟಿ ಪ್ರಕರಣ ದಾಖಲಾಗಿದೆ ಎಂದು ಸಬೂಬು ನೀಡುತ್ತಾ ದೂರುದಾರರಿಗೆ ತತ್ ಕಾಲ್ ಪೋಡಿ ಮಾಡಿಕೊಟ್ಟಿರುವುದಿಲ್ಲವೆಂದು ಕಂಡುಬರುತ್ತವೆ. ಆದರೆ ಈ ಸುತ್ತೋಲೆಯಲ್ಲಿ ಪ್ರಕರಣಗಳು ಬಾಕಿ ಇದ್ದಾಗ ಈ ಸುತ್ತೋಲೆಯ ನಿಯಮಗಳು ಅನ್ವಯವಾಗುವುದಿಲ್ಲವೆಂದು ಎಲ್ಲಿಯೂ ನಮೂದಿಸಿರುವುದಿಲ್ಲ. ಆದ್ದರಿಂದ ಎದುರುದಾರರು

ಸರ್ಕಾರಿ ಸುತ್ತೋಲೆಯನ್ನು ಉಲ್ಲಂಘಿಸಿದ್ದು ಅಲ್ಲದೆ ದೂರುದಾರರ ಆರ್.ಆರ್.ಟಿ ಪ್ರಕರಣವನ್ನು ಶೀಘ್ರ ಇತ್ಯರ್ಥ ಪಡಿಸಿ ಅವರಿಗೆ ಪರಿಹಾರ ಒದಗಿಸುವಲ್ಲಿ ವಿಫಲರಾಗಿದ್ದಾರೆಂದು ಕಂಡುಬರುತ್ತದೆ. ಈ ಸುತ್ತೋಲೆಯ ಬಗ್ಗೆ ಎದುರುದಾರರು ಎಲ್ಲಿಯೂ ಪ್ರಸ್ತಾಪಿಸಿರುವುದಿಲ್ಲ. ಆದ್ದರಿಂದ ಎದುರುದಾರರು ಕರ್ತವ್ಯಲೋಪವೆಸಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ.

ಇ) ಈ ಪ್ರಕರಣದಲ್ಲಿ ಎದುರುದಾರ ನಂ:1 ರವರು ದಿ: 15.3.2015 ರಂದು ತೀರಿಕೊಂಡಿದ್ದಾರೆ. ಆದ್ದರಿಂದ ಇವರನ್ನು ಪ್ರಕರಣದಿಂದ ಕೈಬಿಡಲಾಗಿದೆ. 2ನೇ ಎದುರುದಾರರು ಮಾತ್ರ ಲಭ್ಯವಿರುವುದರಿಂದ ಅವರು ಮಾತ್ರ ಕರ್ತವ್ಯಲೋಪವೆಸಗಿದ್ದಾರೆಂದು ಪರಿಗಣಿಸಲಾಗಿದೆ.

7. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಮತ್ತು ಎದುರುದಾರರು ನೀಡಿರುವ ಉತ್ತರಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ತಮ್ಮ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

8. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

9. 2ನೇ ಎದುರುದಾರರು ಸಾರ್ವಜನಿಕ/ ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೆ ಕರ್ತವ್ಯ ಲೋಪವೆಸಗಿ, ಸಾರ್ವಜನಿಕ/ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ 3(1) (i) ಮತ್ತು (ii) ರನ್ವಯ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, 2ನೇ ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಭಂಧ ಮತ್ತು ಮೇಲ್ಮನವಿ) ನಿಯಮಗಳು 1957ರ

ನಿಯಮ 14-ಎ ರಡಿಯಲ್ಲಿ 2ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆಯನ್ನು ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸಬೇಕೆಂದೂ ಕೋರಿದೆ.

10. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಮಾನ್ಯ ಉಪಲೋಕಾಯುಕ್ತ--2 ರವರಿಗೆ ತಿಳಿಸಲು ಹೇಳಿದೆ.

28/11/16.

[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]

28/11

ಉಪಲೋಕಾಯುಕ್ತರು,

ಕರ್ನಾಟಕ ರಾಜ್ಯ.